ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು.

ಸಂಖ್ಯೆ. ಸಿ4(2)/ಪ್ರೌಶಾಶಿ/ಜೇ.ಪ37/2019-20 ದಿನಾಂಕ:17-10-2019

**ಅಧಿಸೂಚನೆ**

ವಿಷಯ: ದಿನಾಂಕ:31-12-2018ಕ್ಕೆ ಇದ್ದಂತೆ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರೇಡ್-2 ಶಿಕ್ಷಕರ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ186ಎಸ್ಆರ್ಎಸ್2018 ದಿನಂಕ:27/02/2019.
2. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ186 ಎಸ್ಆರ್ಎಸ್2018 ದಿನಂಕ:05/03/2019.
3. ಸರಕಾರದ ಪತ್ರ ಸಂಖ್ಯೆ. ಇಡಿ 152 ಎಲ್‌ಬಿಪಿ 2014, ದಿನಾಂಕ: 20/05/2014.
4. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ186 ಎಸ್ಆರ್ಎಸ್2018 ದಿನಂಕ:15/05/2019.
5. ಈ ಕಛೇರಿ ಪತ್ರ ಸಮ ಸಂಖ್ಯೆ ದಿನಾಂಕ:18/03/2019, 24/09/2018, 20/05/2019 12/06/219 ಮತ್ತು 07/09/2019.

----****----

ಸರ್ಕಾರಿ ಪ್ರೌಢ ಶಾಲಾ ಸಹ ಶಿಕ್ಷಕರು ಗ್ರೇಡ್-2 ಇವರ ಜೇಷ್ಠತಾ ಪಟ್ಟಿಯನ್ನು ತಯಾರಿಸುವಾಗ ಸೇವೆಗೆ ಸೇರಿದ ದಿನಾಂಕವನ್ನು ಪರಿಗಣಿಸದೇ ಆಯ್ಕೆ ಪಟ್ಟಿಯಲ್ಲಿರುವ ಮೆರಿಟ್ ಆಧಾರದ ಮೇಲೆ ಆಯ್ಕೆಯಾಗಿರುವ ಕ್ರಮ ಸಂಖ್ಯೆಯನ್ನು ಪರಿಗಣಿಸಿ ಸಿದ್ದಪಡಿಸುವಂತೆ ಉಲ್ಲೇಖ(3)ರ ಸರಕಾರದ ಪತ್ರದಲ್ಲಿ ತಿಳಿಸಲಾಗಿರುತ್ತದೆ. ಅದರಂತೆ ಸರ್ಕಾರಿ ಪ್ರೌಢ ಶಾಲಾ ಸಹ ಶಿಕ್ಷಕರು ಗ್ರೇಡ್-2 ಇವರ ಜೇಷ್ಠತಾ ಪಟ್ಟಿಯನ್ನು ತಯಾರಿಸುವಾಗ ಸೇವೆಗೆ ಸೇರಿದ ದಿನಾಂಕವನ್ನು ಪರಿಗಣಿಸದೇ ಆಯ್ಕೆ ಪಟ್ಟಿಯಲ್ಲಿರುವ ಮೆರಿಟ್ ಲಿಸ್ಟನಲ್ಲಿ ಇರುವ ಕ್ರಮ ಸಂಖ್ಯೆಯನ್ನು ಪರಿಗಣಿಸಿ ಜೇಷ್ಠತಾ ಪಟ್ಟಿಯನ್ನು ಸಿದ್ದಪಡಿಸಲಾಗಿದೆ. ಹಾಗೂ 1978 ರಿಂದ 1993ರ ವರೆಗೆ ನೇರ ನೇಮಕಾತಿ ಹೊಂದಿದ ಮತ್ತು ಬಡ್ತಿಹೊಂದಿದ ಶಿಕ್ಷಕರ ವಿವರಗಳನ್ನು ವಿಭಾಗಿಯ ಜಂಟಿ ನಿರ್ದೇಶಕರು ಹಾಗೂ ಜಿಲ್ಲಾ ಉಪನಿದೇಶಕರು ಸಲ್ಲಿಸಿರುವ ಮಾಹಿತಿ ಆಧರಿಸಿ ಬ್ಲಾಕ್-1ನಲ್ಲಿ ಸಿದ್ದಪಡಿಸಿದೆ.

ಸದರಿ ಜೇಷ್ಠತಾ ಪಟ್ಟಿಯನ್ನು ಅಂತಿಮಗೊಳಿಸುವ ಸಂಬಂಧ ಬೆಂಗಳೂರು ಮತ್ತು ಮೈಸೂರು ವಿಭಾಗೀಯ ಜಂಟಿ ನಿರ್ದೇಶಕರು ಹಾಗೂ ಜಿಲ್ಲಾ ಉಪನಿರ್ದೇಶಕರು ಸಲ್ಲಿಸಿದ ಮಾಹಿತಿಯನ್ನಾಧರಿಸಿ ಉಲ್ಲೇಖ(5)ರ ಪತ್ರ ದಿನಾಂಕ:12/06/2019 ರಲ್ಲಿ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಿ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿತ್ತು.



Scanned by CamScanner

ಸದರಿ ತಾತ್ಕಾಲಿಕ ಜೇಷ್ಠತಾ ಪಟ್ಟಿಗೆ ಸ್ವೀಕೃತವಾಗಿರುವ ಆಕ್ಷೇಪಣೆಗಳನ್ನು ಜಿಲ್ಲಾ ಉಪನಿರ್ದೇಶಕರು ಪರಿಶೀಲಿಸಿ ಅಗತ್ಯ ತಿದ್ದುಪಡಿಗಳನ್ನು ಸರಿಪಡಿಸಿ ಸಲ್ಲಿಸಿರುವ ಮಹಿತಿಯನ್ನು ಆಧರಿಸಿ ಬೆಂಗಳೂರು ಮತ್ತು ಮೈಸೂರು ವಿಭಾಗದ ಅಂತಿಮ ಜೇಷ್ಠತಾ ಪಟ್ಟಿಯನ್ನು ಇಲಾಖೆಯ ಅಂತರಜಾಲದಲ್ಲಿ ಪ್ರಕಟಿಸಿದೆ.

ನಿರ್ದೇಶಕರು(ಪ್ರೌಢಶಿಕ್ಷಣ)
ಸಾರ್ವಜನಿಕ ಶಿಕ್ಷಣ ಇಲಾಖೆ
ಬೆಂಗಳೂರು

ಗೆ,

1. ಜಂಟಿ ನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ಬೆಂಗಳೂರು ರವರಿಗೆ ಅಗತ್ಯ ಕ್ರಮಕ್ಕಾಗಿ.
2. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ, ಬೆಂಗಳೂರು ಇವರಿಗೆ ಅಗತ್ಯ ಕ್ರಮಕ್ಕಾಗಿ.
3. ವಿಭಾಗೀಯ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಮತ್ತು ಮೈಸೂರು ಇವರಿಗೆ ಅಗತ್ಯ ಕ್ರಮಕ್ಕಾಗಿ.
4. ಬೆಂಗಳೂರು ಮತ್ತು ಮೈಸೂರು ವಿಭಾಗದ ಎಲ್ಲಾ ಉಪನಿರ್ದೇಶಕರು (ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ, ರವರುಗಳಿಗೆ ಅಗತ್ಯ ಕ್ರಮಕ್ಕಾಗಿ.
5. ಕಛೇರಿ ಪ್ರತಿ.

18/10/2019



Scanned by CamScanner